ಸೃಜನಿ

SRUJANI: Indian Journal of Innovative Research and Development (SIJIRD)
Volume-2 Issue 4, September-October 2023, Pp. 36-38
Bi-Monthly, Peer-Reviewed, Open Access, Indexed Journal

I S S N: 2583-3510
SIRDF JOURNALS
editor@srujani.in
www.srujani.in

# ಮಂಡ್ಯ ಜಿಲ್ಲೆಯ ರೈತರ ಸಮಸ್ಯೆಗಳು: ಒಂದು ಸಮೀಕ್ಷೆ

**ಡಾ. ಸತೀಶ ಹೆಚ್.ಎನ್.**
ಸಮಾಜಶಾಸ್ತ್ರ ವಿಭಾಗ, ಮಹಾರಾಜ ಕಾಲೇಜು, ಮೈಸೂರು ವಿಶ್ವವಿದ್ಯಾನಿಲಯ, ಮೈಸೂರು

**Abstract:**
*ಭಾರತದಲ್ಲಿ ಆಧುನಿಕತೆ ಪರಿಕಲ್ಪನೆಗಳು ಅಭಿವೃದ್ಧಿಗೊಂಡಂತೆ ಸ್ಥಳೀಯ ಮಟ್ಟದಲ್ಲಿ ಅನೇಕ ರೀತಿಯ ಸಂಕೀರ್ಣ ಸಮಸ್ಯೆಗಳು ಹುಟ್ಟಿಕೊಳ್ಳುತ್ತಾ ಬಂದಿದೆ. ಜಗತ್ತು ಎಲ್ಲಾ ಆಧುನಿಕತೆಯನ್ನು ಅನುಭವಿಸಿದರೂ ಕೂಡ ಅನೇಕ ಸಮಸ್ಯೆಗಳಿಗೆ ಸೂಕ್ತ ಪರಿಹಾರ ಕಂಡುಕೊಳ್ಳುವಲ್ಲಿ ಸಾಧ್ಯವಾಗಿಲ್ಲ. ಇಂತಹ ಸಮಸ್ಯೆಯಲ್ಲಿ ರೈತರ ಆತ್ಮಹತ್ಯೆಯೂ ಕೂಡ ಪ್ರಮುಖ ಸಮಸ್ಯೆಯಾಗಿದೆ. ರೈತರ ಆತ್ಮಹತ್ಯೆ ರಾಷ್ಟ್ರೀಯ ಸಮಸ್ಯೆಯಾಗಿದೆ. ಪ್ರಸ್ತುತ ಲೇಖನದಲ್ಲಿ ಮಂಡ್ಯ ಜಿಲ್ಲೆಯ ರೈತರು ಎದುರಿಸುತ್ತಿರುವ ಸಮಸ್ಯೆಗಳ ಕುರಿತು ವಿಮರ್ಶಿಸಲಾಗಿದೆ.*

**Keywords:** *ಕೃಷಿ, ರೈತರು, ರೈತರ ಆತ್ಮಹತ್ಯೆ, ಶೋಷಣೆ ಮತ್ತು ಸಮಸ್ಯೆಗಳು.*

## ಪೀಠಿಕೆ

ಭಾರತವು ಕೃಷಿ ಪ್ರಧಾನ ರಾಷ್ಟ್ರವಾಗಿದ್ದು, ಶೇ.70 ರಷ್ಟು ಜನರು ಕೃಷಿಯನ್ನೇ ಅವಲಂಬಿಸಿದ್ದಾರೆ. ಕೃಷಿ ಭಾರತದ ಬೆನ್ನೆಲುಬಾಗಿದ್ದು, ರಾಷ್ಟ್ರದ ಆರ್ಥಿಕತೆಗೆ ಬಹಳ ಪ್ರಮುಖ ಕೊಡುಗೆಯನ್ನು ನೀಡುತ್ತಿದೆ. ಕೃಷಿಯಲ್ಲಿ ತೊಡಗಿಕೊಂಡಿರುವ ರೈತನ ಬದುಕು ದಿನದಿಂದ ದಿನಕ್ಕೆ ಸಮಸ್ಯೆಗಳ ಸುಳಿಯಲ್ಲಿ ಸಿಲುಕುತ್ತಿದ್ದು ಅನೇಕ ಸಮಸ್ಯೆಗಳನ್ನು ಎದುರಿಸುತ್ತಿದ್ದಾರೆ. ರೈತರು ಪ್ರಮುಖವಾಗಿ ಬಡತನ, ಅನಕ್ಷರತೆ, ತಾಂತ್ರಿಕ ಜ್ಞಾನದ ಕೊರತೆ, ಸಾಲ, ಮಳೆ ಕೊರತೆ, ಕಡಿಮೆ ಬೆಲೆ, ಮಳೆಯ ಅಭಾವ, ನೀರಾವರಿ ಕೊರತೆ, ಬಿತ್ತನೆ ಬೀಜದ ಕೊರತೆ, ಸರ್ಕಾರದ ಯೋಜನೆಗಳು ಸರಿಯಾದ ಸಮಯಕ್ಕೆ ತಲುಪದಿರುವುದು ಹೀಗೆ ಅನೇಕ ಸಮಸ್ಯೆಗಳನ್ನು ಎದುರಿಸುತ್ತಿದ್ದಾರೆ.

ಸಮಕಾಲಿನ ಸನ್ನಿವೇಶಗಳಲ್ಲಿ ರೈತರ ಸಮಸ್ಯೆಗಳ ಮೂಲ ನೆಲೆಯನ್ನು ಅರಿತು ಅವುಗಳಿಗೆ ಸೂಕ್ತ ಪರಿಹಾರ ನೀಡುವುದು ಮತ್ತು ಪುನಶ್ಚೇತನಗೊಳಿಸುವ ಕಾರ್ಯವನ್ನು ಸರ್ಕಾರ ಮಾಡಬೇಕು. ಕರ್ನಾಟಕದಲ್ಲಿ ಕಳೆದ ಒಂದು ದಶಕದಿಂದ ಸರ್ಕಾರಗಳು ಎಷ್ಟೇ ಪ್ರಯತ್ನಪಟ್ಟರೂ ಕೃಷಿ ಕ್ಷೇತ್ರ ಮತ್ತು ರೈತರ ಸಮಸ್ಯೆಗಳಿಗೆ ಪರಿಹಾರವನ್ನು ನೀಡಲು ಸಾಧ್ಯವಾಗುತ್ತಿಲ್ಲ ಹಾಗೂ ರೈತರ ಆತ್ಮಹತ್ಯೆ ಹೆಚ್ಚಳದ ಪ್ರಮಾಣವನ್ನೂ ಕೂಡ ಸರ್ಕಾರ ತಡೆಗಟ್ಟುವಲ್ಲಿ ವಿಫಲವಾಗಿದೆ.

## ಮಂಡ್ಯ ಜಿಲ್ಲೆಯ ರೈತರ ಪ್ರಮುಖ ಸಮಸ್ಯೆಗಳು

ಮಂಡ್ಯ ಜಿಲ್ಲೆಯು ಸಕ್ಕರೆ ನಾಡೆಂದೇ ಪ್ರಸಿದ್ಧವಾಗಿದೆ. ಕರ್ನಾಟಕ ರಾಜ್ಯದ ದಕ್ಷಿಣ ಭಾಗದಲ್ಲಿರುವ ಮಂಡ್ಯ ಜಿಲ್ಲೆ ರಾಜ್ಯದಲ್ಲಿನ ಸಂಪತ್‌ಭರಿತ ಜಿಲ್ಲೆಗಳಲ್ಲಿ ಒಂದಾಗಿದೆ. ಮಂಡ್ಯ ಜಿಲ್ಲೆಯು 4,961 ಚ.ಕಿ.ಮೀ ಭೂ ವಿಸ್ತೀರ್ಣವನ್ನು ಹೊಂದಿದ್ದು. ಇದರಲ್ಲಿ 24 ಸಾವಿರ ಹೆಕ್ಟೇರ್ ಅರಣ್ಯ ಪ್ರದೇಶ ಮತು 328 ಸಾವಿರ ಹೆಕ್ಟೇರ್ ವ್ಯವಸಾಯ

***Please cite this article as:*** ಸತೀಶ ಹೆಚ್. ಎನ್. (2023). ಮಂಡ್ಯ ಜಿಲ್ಲೆಯ ರೈತರ ಸಮಸ್ಯೆಗಳು: ಒಂದು ಸಮೀಕ್ಷೆ. *ಸೃಜನಿ: ಇಂಡಿಯನ್ ಜರ್ನಲ್ ಆಫ್ ಇನ್ನೋವೇಟಿವ್ ರಿಸರ್ಚ್ ಅಂಡ್ ಡೆವಲಪ್‌ಮೆಂಟ್*, 2(4), 36–38.

ಯೋಗ್ಯವಾದ ಪ್ರದೇಶ ಇದೆ. ಕರ್ನಾಟಕ ರಾಜ್ಯದ ಜಿಲ್ಲೆಗಳಲ್ಲಿ ಕೊಡಗು ಹಾಗೂ ಉಡುಪಿ ಜಿಲ್ಲೆಗಳನ್ನು ಬಿಟ್ಟರೆ ಅತ್ಯಂತ ಕಡಿಮೆ ವಿಸ್ತೀರ್ಣವುಳ್ಳ ಜಿಲ್ಲೆಯಾಗಿದೆ. ಜಿಲ್ಲೆಯಲ್ಲಿ ಪ್ರಮುಖವಾಗಿ ಕಾವೇರಿ, ಹೇಮಾವತಿ, ಶಿಂಷಾ, ಲೋಕಪಾವನಿ ನದಿಗಳಿದ್ದು, ಕೃಷಿಗೆ ಪೂರಕವಾದ ವಾತಾವರಣವಿದೆ. ವಿಶ್ವೇಶ್ವರಯ್ಯ ನಾಲೆಯು ಕೃಷಿಯನ್ನು ಅತ್ಯಂತ ಶ್ರೀಮಂತಗೊಳಿಸಿವೆ. ಮಂಡ್ಯ ಜಿಲ್ಲೆಯಲ್ಲಿ ಅನೇಕ ಚಳುವಳಿಗಳು ನಡೆದಿದ್ದರೂ ರೈತ ಚಳುವಳಿಗೆ ಹೆಚ್ಚು ಪ್ರಸಿದ್ಧವಾಗಿದೆ. ಬಹುತೇಕ ಹೋರಾಟಗಳು ಯಶಸ್ವಿಯಾಗಿವೆ. ಮಂಡ್ಯ ಜಿಲ್ಲೆಯ ರೈತರು ಬಹುಮುಖ್ಯವಾಗಿ ನೀರಾವರಿ ಸೌಲಭ್ಯ, ಕಡಿಮೆ ಉತ್ಪಾದನೆ, ಕೃಷಿಯಲ್ಲಿ ನಷ್ಟ, ಸಣ್ಣ ಹಿಡುವಳಿ, ಸಾಲದ ಹೊರೆ, ತಂತ್ರಜ್ಞಾನದ ಕೊರತೆ, ಸಾಂಪ್ರದಾಯಿಕ ಕೃಷಿ ಪದ್ಧತಿ, ಮಾರುಕಟ್ಟೆ ಸಮಸ್ಯೆ, ಸಾಗಣಿಕೆ ಸಮಸ್ಯೆ, ಬಿತ್ತನೆ ಬೀಜದ ಕೊರತೆ, ಕುಸಿಯುತ್ತಿರುವ ಮಣ್ಣಿನ ಫಲವತ್ತತೆ ಹೀಗೆ ಅನೇಕ ಸಮಸ್ಯೆಗಳನ್ನು ಎದುರಿಸುತ್ತಿದ್ದಾರೆ. ಈ ಸಮಸ್ಯೆಗಳಿಂದಾಗಿ ಅನೇಕ ರೈತರು ಆತ್ಮಹತ್ಯೆ ಮಾಡಿಕೊಳ್ಳುತ್ತಿರುವುದು ಕಂಡು ಬರುತ್ತಿದೆ.

**ಮಂಡ್ಯ ಜಿಲ್ಲೆಯಲ್ಲಿ ರೈತರ ಆತ್ಮಹತ್ಯೆಗಳು**

ಮಂಡ್ಯ ಜಿಲ್ಲೆಯಲ್ಲಿ ರೈತರ ಆತ್ಮಹತ್ಯೆಯು ಹೊಸತೇನಲ್ಲ. ಕೃಷಿ ಸಮಸ್ಯೆಯಿಂದಾಗಿ ದಿನನಿತ್ಯ ರೈತರ ಆತ್ಮಹತ್ಯೆಯ ಪ್ರಕರಣಗಳು ಹೆಚ್ಚಾಗುತ್ತಿವೆ. ಭಾರತದಲ್ಲಿ ರೈತರ ಆತ್ಮಹತ್ಯೆಯ ಪ್ರಮಾಣವನ್ನು ಗಮನಿಸಿದಾಗ 2014 ರಿಂದ ಇಲ್ಲಿಯವರೆಗೆ ಒಟ್ಟು 2,84,344 ಕೃಷಿಕರು ಆತ್ಮಹತ್ಯೆ ಮಾಡಿಕೊಂಡಿರುವುದು ವರದಿಯಾಗಿದೆ. ದೇಶದಲ್ಲಿ ಪ್ರತಿವರ್ಷ ಸರಾಸರಿ 1,19,006 ಜನಸಾಮಾನ್ಯರು ಆತ್ಮಹತ್ಯೆ ಮಾಡಿಕೊಂಡರೆ, 15,799 (13.28%) ರೈತರು ಆತ್ಮಹತ್ಯೆ ಮಾಡಿಕೊಳ್ಳುತ್ತಿದ್ದಾರೆ. ಒಟ್ಟು ಆತ್ಮಹತ್ಯೆಯ ಪ್ರಮಾಣದಲ್ಲಿ ರೈತರ ಪ್ರಮಾಣವು 2004ರವರೆಗೂ ಏರುಗತಿಯಲ್ಲಿದ್ದು, ಕ್ರಮೇಣ ಇಳಿಮುಖವಾಗುತ್ತಿದೆ.

ಬಹುತೇಕ ರೈತರು ಆತ್ಮಹತ್ಯೆಯ ಹಾದಿ ಹಿಡಿದಿರುವುದು ದುರದೃಷ್ಟಕರ. ಅನ್ನ ನೀಡುವ ಕೈಗಳು ನೇಣಿಗೆ ಕೊರಳು ಒಡ್ಡುತ್ತಿರುವುದು ಆತಂಕಕಾರಿ ವಿಚಾರ. ಇತ್ತೀಚಿನ ದಿನದಲ್ಲಿ ಕರ್ನಾಟಕದಲ್ಲಿ ರೈತರ ಆತ್ಮಹತ್ಯೆ ಪ್ರಮಾಣ ಸ್ವಲ್ಪಮಟ್ಟಿಗೆ ಇಳಿಕೆ ಕಂಡಿವೆ. 2017ರಲ್ಲಿ 2,079 ಮಂದಿ 2016ರಲ್ಲಿ 2,160 ಮಂದಿ ರೈತರು ಆತ್ಮಹತ್ಯೆ ಮಾಡಿಕೊಂಡಿದ್ದರು. ಆದರೆ ಇತ್ತೀಚಿನ ದಿನಗಳಲ್ಲಿ 2000 ಕ್ಕಿಂತ ಕಡಿಮೆ ಪ್ರಮಾಣದಲ್ಲಿದೆ.

ಸಕ್ಕರೆ ಜಿಲ್ಲೆ ಖ್ಯಾತಿಯ ಮಂಡ್ಯದಲ್ಲಿ ಈ ವರೆಗೆ 108 ರೈತರು ಆತ್ಮಹತ್ಯೆಗೆ ಶರಣಾಗಿದ್ದಾರೆ. ಆದರೆ ಸರ್ಕಾರ ಅನ್ನದಾತರ ಕಷ್ಟಗಳನ್ನು ಸರಿಯಾಗಿ ಅರಿತು ಸಮಸ್ಯೆ ಬಗೆಹರಿಸುವ ಪ್ರಯತ್ನ ಮಾಡಿಲ್ಲ. ಆತ್ಮಹತ್ಯೆ ಮಾಡಿಕೊಂಡ ರೈತರ ಕುಟುಂಬಕ್ಕೆ ಸರ್ಕಾರ 5 ಲಕ್ಷ ರೂ ಪರಿಹಾರ ಘೋಷಿಸಿದೆ ಹಾಗೂ ಮಂಡ್ಯ ಜಿಲ್ಲೆಯಲ್ಲಿ ಪ್ರಸ್ತುತ ವರ್ಷದಲಿ 63 ರೈತರು ಆತ್ಮಹತ್ಯೆಯನ್ನು ಮಾಡಿಕೊಂಡಿರುವುದು ಮಂಡ್ಯ ಜಿಲ್ಲೆಯಲ್ಲಿ ವರದಿಯಾಗಿರುತ್ತದೆ. ಈ ಮೂಲಕ ರಾಜ್ಯದಲ್ಲಿ ರೈತರ ಆತ್ಮಹತ್ಯೆ ಪ್ರಕರಣದಲ್ಲಿ ಮತ್ತೆ ಏರಿಕೆ ಕಂಡಿರುವುದು ಆತಂಕ ಮೂಡಿಸಿದೆ. ಮಂಡ್ಯ ಜಿಲ್ಲೆ ಕೃಷಿ ಪ್ರಧಾನ ಜಿಲ್ಲೆಯಾಗಿದ್ದು ಇಲ್ಲಿ ರೈತ ಆತ್ಮಹತ್ಯೆಯ ಒಂದು ರೀತಿಯ ಪ್ರತಿಭಟನೆಯ ಸ್ವರೂಪವಾಗಿದೆ. ಇಂದಿನ ಸರ್ಕಾರಗಳು ಕೆಲವೊಂದು ರೈತಪರ ಯೋಜನೆಗಳನ್ನು ಜಾರಿಗೊಳಿಸಿದೆ. ಜಾರಿಗೊಳಿಸದಿದ್ದರೆ ಕೃಷಿ ಪರಂಪರೆಯೇ ಕಣ್ಮರೆಯಾಗುತ್ತಿತ್ತು. ಮಂಡ್ಯ ಜಿಲ್ಲೆಯಲ್ಲಿ ರೈತರ ಆತ್ಮಹತ್ಯೆಯ ತಡೆಯಲು ಸ್ಥಳಿಯ ಮಟ್ಟದಲ್ಲಿ ರೈತ ಸಾಂತ್ವನ ಕೇಂದ್ರಗಳನ್ನು ತೆರೆದು ರೈತರಿಗೆ ಬೇಕಾಗಿರುವ ಬಿತ್ತನೆ ಬೀಜ, ರಸಗೊಬ್ಬರ, ಕೀಟನಾಶಕ, ಕೃಷಿ ಉಪಕರಣ, ಸಾಲಮನ್ನಾ ಯೋಜನೆಗಳನ್ನು ಜಾರಿಗೆ ತರುವುದರ ಮೂಲಕ ರೈತರ ಜೀವನವನ್ನು ಸುಧಾರಿಸಬೇಕಿದೆ.

2015 ರಿಂದ ಜಿಲ್ಲೆಯಲ್ಲಿ ಆತ್ಮಹತ್ಯೆ ಪ್ರಕರಣಗಳು ಹೆಚ್ಚುತ್ತಿದ್ದು, ಕಳೆದ ನಾಲ್ಕು ವರ್ಷಗಳಿಂದ 350 ಕ್ಕೂ

ಹೆಚ್ಚು ರೈತರು ಆತ್ಮಹತ್ಯೆ ಮಾಡಿಕೊಂಡಿದ್ದಾರೆ. 2018ರಲ್ಲಿ ಕುಮಾರಸ್ವಾಮಿ ನೇತೃತ್ವದ ಸಮ್ಮಿಶ್ರ ಸರ್ಕಾರ ಸಾಲ ಮನ್ನಾ ಯೋಜನೆ ಘೋಷಣೆ ಮಾಡಿದರೂ ಸಹ 57 ರೈತರು ಆತ್ಮಹತ್ಯೆ ಮಾಡಿಕೊಂಡಿದ್ದು, ಇವುಗಳಲ್ಲಿ 45 ರೈತರ ಕುಟುಂಬಗಳಿಗೆ ಪರಿಹಾರ ವಿತರಿಸಲಾಗಿದೆ. ಈ ಹಿಂದೆ ಕಾಂಗ್ರೆಸ್ ಸರ್ಕಾರದ ಅವಧಿಯಲ್ಲಿಯೂ ಸಾಲಮನ್ನಾ ಮಾಡಲಾಗಿತ್ತು. ಆದರೂ 110 ಮಂದಿ ಆತ್ಮಹತ್ಯೆಗೆ ಶರಣಾಗಿದ್ದರು. ಆ ಸಂದರ್ಭದಲ್ಲಿ 26 ಪ್ರಕರಣಗಳು ತಿರಸ್ಕಾರಗೊಂಡು ಇನ್ನುಳಿದ 84 ರೈತ ಕುಟುಂಬಗಳಿಗೆ ಪರಿಹಾರ ನೀಡಲಾಯಿತು. 2017–18 ಈ ವರ್ಷದಲ್ಲಿಯೇ ಮಂಡ್ಯ ಜಿಲ್ಲೆಯಲ್ಲಿ 108 ರೈತರು ಆತ್ಮಹತ್ಯೆ ಮಾಡಿಕೊಂಡಿದ್ದಾರೆ. 2019–2020ರ ಸಾಲಿನಲ್ಲಿ ಕರ್ನಾಟಕದಲ್ಲಿ 908 ರೈತರು ಆತ್ಮಹತ್ಯೆ ಪ್ರಕರಣಗಳ ವರದಿಯಾಗಿದ್ದು. ಇದರಲ್ಲಿ 660 ಪ್ರಕರಣಗಳನ್ನು ಅರ್ಹ ಪ್ರಕರಣಗಳೆಂದು ಪರಿಗಣಿಸಲಾಗಿದೆ. ಕೇಂದ್ರ ಮತ್ತು ರಾಜ್ಯ ಸರ್ಕಾರಗಳು ರೈತರ ಕಲ್ಯಾಣಕ್ಕಾರಿ ಹಲವಾರು ಕಲ್ಯಾಣ ಕಾರ್ಯಕ್ರಮಗಳನ್ನು ಹಮ್ಮಿಕೊಂಡಿದ್ದರೂ ಕೂಡ ರೈತರ ಆತ್ಮಹತ್ಯೆ ಪ್ರಕರಣ ನೀರಿಕ್ಷಿತ ಪ್ರಮಾಣದಲ್ಲಿ ನಿಯಂತ್ರಣಕ್ಕೆ ಬಾರದಿರುವುದು ಸರ್ಕಾರಕ್ಕೆ ಹಾಗೂ ರಾಜ್ಯಕ್ಕೆ ತೀವ್ರ ಅಘಾತದ ವಿಚಾರವಾಗಿದೆ.

**ಉಪಸಂಹಾರ**

ಸಮಕಾಲೀನ ಮಂಡ್ಯ ಜಿಲ್ಲೆಯ ರೈತರ ಪರಿಸ್ಥಿತಿಯನ್ನು ಅವಲೋಕಿಸಿದಾಗ ಮಂಡ್ಯ ಜಿಲ್ಲೆಯಲ್ಲಿ ರೈತರ ಆತ್ಮಹತ್ಯೆ ಪ್ರಕಣಗಳು ಹೆಚ್ಚಿನ ಪ್ರಮಾಣದಲ್ಲಿದ್ದರೂ ಇತ್ತೀಚಿನ ದಿನಗಳಲ್ಲಿ ಕಡಿಮೆಯಾಗುತ್ತಿದೆ. ಸರ್ಕಾರದ ಯೋಜನೆಗಳು ಮತ್ತು ನಿಲುವುಗಳು ರೈತ ಸಬಲೀಕರಣದಲ್ಲಿ ವೈಫಲ್ಯತೆಯನ್ನು ಸಾಧಿಸಿರುವುದರಿಂದ ರೈತರ ಬದುಕು ಅತಂತ್ರವಾಗಿದೆ. ಮಂಡ್ಯ ಜಿಲ್ಲೆಯು ಕೃಷಿ ಕೇಂದ್ರಿತ ಜಿಲ್ಲೆಯಾಗಿದ್ದು ರೈತರ ಬದುಕು ಕೃಷಿಯನ್ನೇ ಅವಲಂಬಿಸಿದೆ. ಸರ್ಕಾರದ ಯೋಜನೆಗಳು ಪರಿಣಾಮಕಾರಿಯಾಗಿ ಮತ್ತು ಅರ್ಹರಿಗೆ ತಲುಪುವಂತೆ ಮಾಡುವುದು ಸರ್ಕಾರದ ಹೊಣೆಯಾಗಿದೆ.

**ಪರಾಮರ್ಶನ ಗ್ರಂಥಗಳು**


- *ಕರ್ನಾಟಕ ರೈತ ಹೋರಾಟದ ಆಶೋತ್ತರಗಳು. (1984).* ಕರ್ನಾಟಕ ರಾಜ್ಯ ರೈತ ಸಂಘ.
- ಕುಮಾರಸ್ವಾಮಿ, ಎ.ಎನ್. (2016). *ರೈತರ ಆತ್ಮಹತ್ಯೆ–ಒಂದು ಮನೋಸಾಮಾಜಿಕ ವಿಶ್ಲೇಷಣೆ.* ಸಪ್ನ ಬುಕ್‌ಹೌಸ್.
- ಮಲ್ಲಿಕೇಶ ಹೆಚ್.ಹೆಚ್. (2020). *ಮಂಡ್ಯ ಜಿಲ್ಲಾ ರೈತ ಚಳುವಳಿಗಳು.* ಗಗನ ಪ್ರಕಾಶನ.
- ಮುಜ಼ಾಫರ್ ಅಸ್ಸಾದಿ. (2009). *ಕರ್ನಾಟಕದಲ್ಲಿ ಐಡೆಂಟಿಟಿ ರಾಜಕೀಯ, ರೈತ, ರೈತ ಹೋರಾಟ ಹಾಗೂ ಸಾಮಾಜಿಕ ಚಳುವಳಿ.* ಕೆ.ಎನ್.ಮುದ್ದಪ್ಪ ಸ್ಮಾರಕ ಟ್ರಸ್ಟ್.
- ನಾಗರಾಜು, ಎಂ.ಜಿ. (2006). *ಕರ್ನಾಟಕ ರೈತ ಚಳುವಳಿ–ಸತ್ಯಾಗ್ರಹಗಳು.* ಕರ್ನಾಟಕ ವಿಧಾನ ಮಂಡಲ ಗ್ರಂಥಾಲಯ ಸಮಿತಿ.
- ನಂದಿನಿ ಜಯರಾಂ, ಕೆ.ಎನ್. (2011). *ರೈತ ಮಹಿಳೆ.* ರಾಜೇಂದ್ರ ಪ್ರಿಂಟರ್ಸ್ ಮತ್ತು ಪಬ್ಲಿಷ್‌ರ್ಸ್.
- ಸೂರಿ, ಕೆ.ಎಸ್. (2006). *ರೈತರ ಆತ್ಮಹತ್ಯೆಗಳಿಗೆ ಕಾರಣವೇನು.* ನವಕರ್ನಾಟಕ ಪ್ರಕಾಶನ.
- ಶಿವಸುಂದರ್. (2008). *ರೈತರ ಆತ್ಮಹತ್ಯೆ (ಜಾಗತೀಕರಣದ ಉರುಳಿಗೆ ರೈತರ ಕೊರಳು).* ಲಂಕೇಶ್ ಪ್ರಕಾಶನ.